ಚಾಮುಂಡೇಶ್ವರಿ ವಿದ್ಯುತ್ ಸರಬರಾಜು
ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ನಿಗಮ ಕಾರ್ಯಾಲಯ, ಚಾವಿಸನಿನಿ,
ಮೈಸೂರು-570017
Telephone No: 0821-2343384

CHAMUNDESHWARI ELECTRICITY SUPPLY CORPORATION LIMITED
(A Government of Karnataka Undertaking)
Corporate Office,CESC, Mysore-570017
Web Site: www.cescmysore.org.
E-Mail: gmhrd@cescmysore.org

Company Identity Number[CIN]:- U40109KA2004SGC035177

ಕ್ರಮಾಂಕ:ಪ್ರವ್ಯ(ಆ.ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/ಹಿ.ಸ-2/21-22/ Cys-1206 ದಿನಾಂಕ: 19 NOV 2021
ಲಗತ್ತು: 01 ಹಾಳೆ.

# ಸುತ್ತೋಲೆ

**ವಿಷಯ:** ಚಾವಿಸನಿನಿಯ ವಾಹನಗಳ ನಾಮಫಲಕಗಳನ್ನು ಬಳಸುತ್ತಿರುವುದರ ಬಗ್ಗೆ.
**ಉಲ್ಲೇಖ:** ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಸುತ್ತೋಲೆ ಸಂಖ್ಯೆ: ಹೆಚ್‌ಡಿ 346 ಎಸ್‌ಎಸ್‌ಟಿ 2019 ದಿನಾಂಕ:25.08.2021.

*****

ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಕ್ರಿಮಿನಲ್ ಪಿಟಿಷನ್ ಸಂಖ್ಯೆ 1850/2017 ದಿನಾಂಕ: 09.04.2021ರಂದು ಹೊರಡಿಸಿರುವ ಮಧ್ಯಂತರ ಆದೇಶದಲ್ಲಿ ರಾಜಕಾರಣಿಗಳು, ಖಾಸಗಿ ವ್ಯಕ್ತಿಗಳು ತಮ್ಮ ಹುದ್ದೆಯ ವಿವರಗಳನ್ನೊಳಗೊಂಡ ಅನಧಿಕೃತ ನಂಬರ್ ಪ್ಲೇಟುಗಳನ್ನು ತಮ್ಮ ಖಾಸಗಿ ವಾಹನಗಳಿಗೆ ಅಳವಡಿಸಿಕೊಂಡು ಸಂಚರಿಸುತ್ತಿರುವುದು ಖಾಸಗಿ ವ್ಯಕ್ತಿಗಳು ತಮ್ಮ ಸಂಘ ಸಂಸ್ಥೆಗಳ ಲಾಂಛನ ಮತ್ತು ಹೆಸರುಗಳನ್ನು ನಾಮಫಲಕದಲ್ಲಿ ನಿಯಮ ಬಾಹಿರವಾಗಿ ಬಳಸುತ್ತಿರುವುದು ಹಾಗೂ ಸರ್ಕಾರಿ ಅಧಿಕಾರಿಗಳು ತಮ್ಮ ಸ್ವಂತ ವಾಹನಕ್ಕೆ ಸರ್ಕಾರಿ ಸಂಸ್ಥೆಯ ಅಂದರೆ BBMP, BDA, KHB, KSFC, MSIL, KPTCL,BESCOM, KSRTC ಈ ರೀತಿಯ ಅನಧಿಕೃತ ನಂಬರ್ ಪ್ಲೇಟುಗಳನ್ನು ಅಳವಡಿಸಿಕೊಂಡು ಸಂಚರಿಸುತ್ತಿರುವ ವಾಹನಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿರುತ್ತಾರೆ.

ಚಾವಿಸನಿನಿಯ ಅಧಿಕಾರಿ/ಸಿಬ್ಬಂದಿಗಳು ತಮ್ಮ ಸ್ವಂತ ವಾಹನಕ್ಕೆ ನಿಗಮದ ಅಂದರೆ, CESC ಎಂದು ಅನಧಿಕೃತ ಪ್ಲೇಟುಗಳನ್ನು ಅಳವಡಿಸಿಕೊಂಡು ಸಂಚರಿಸುತ್ತಿರುವುದು ಕರ್ನಾಟಕ ವಾಹನಗಳ ನಿಯಮಗಳು 1989 ನಿಯಮ 145ಎ ಹಾಗೂ Emblems and Names (Prevention of Improper Use) Act 1950ರ ಕಲಂ 3ರ ಅನ್ವಯ ನಿಯಮಬಾಹಿರವಾಗಿರುತ್ತದೆ. ಆದುದರಿಂದ ನಿಗಮದ ಅಧಿಕಾರಿಗಳು/ಸಿಬ್ಬಂದಿಗಳು ತಮ್ಮ ಖಾಸಗಿ ವಾಹನಗಳಿಗೆ ನಿಗಮದ ಪ್ಲೇಟುಗಳನ್ನು ಬಳಸದೇ ಇರಲು ಕಟ್ಟುನಿಟ್ಟಾಗಿ ಸೂಚಿಸಿದೆ.

ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿರವರು ಈ ಕುರಿತು ನೀಡಲಾದ ಸುತ್ತೋಲೆಯನ್ನು ಈ ಪತ್ರದೊಂದಿಗೆ ಲಗತ್ತಿಸಿ, ಸುತ್ತೋಲೆಯಂತೆ ಕ್ರಮ ಕೈಗೊಳ್ಳಲು ಸೂಚಿಸಿದೆ.

| ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರಿಂದ ಅನುಮೋದಿಸಲ್ಪಟ್ಟಿರುತ್ತದೆ. |
|---|

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ.)
ಚಾ.ವಿ.ಸ.ನಿ.ನಿ., ಮೈಸೂರು.

<u>ಪ್ರತಿಗಳು:</u>

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.

ಪು.ತಿ.ನೋ.

- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿರವರ ಮಾಹಿತಿಗಾಗಿ.
- ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ, ಚಾವಿಸನಿನಿರವರ ಮಾಹಿತಿಗಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಆ.ಕಾ-ವ್ಯ.ನಿ/ನಿ(ತಾಂ)/ಮು.ಆ.ಅ
- ಸ-2(ಆ ಮತ್ತು ಮಾ.ಸಂ)/ಪ್ರ.ಕ.

ಕರ್ನಾಟಕ ಸರ್ಕಾರ

ಸಂಖ್ಯೆ:ಒಇ 346 ಎಸ್‌ಎಸ್‌ಟಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 25-08-2021

## ಸುತ್ತೋಲೆ

1. ಮಾನ್ಯ ಉಚ್ಚ ನ್ಯಾಯಾಲಯದ ಕ್ರಿಮಿನಲ್ ಅರ್ಜಿ ಸಂಖ್ಯೆ: 1850/2017 ದಿನಾಂಕ: 09-04-2021ರಂದು ಹೊರಡಿಸಿರುವ ಮಧ್ಯಂತರ ಆದೇಶದಲ್ಲಿ ರಾಜಕಾರಣಿಗಳು, ಖಾಸಗಿ ವ್ಯಕ್ತಿಗಳು ತಮ್ಮ ಹುದ್ದೆಯ ವಿವರಗಳನ್ನೊಳಗೊಂಡ ಅನಧಿಕೃತ ನಂಬರ್ ಪ್ಲೇಟುಗಳನ್ನು ತಮ್ಮ ಖಾಸಗಿ ವಾಹನಗಳಿಗೆ ಅಳವಡಿಸಿಕೊಂಡು ಸಂಚರಿಸುತ್ತಿರುವುದು, ಖಾಸಗಿ ವ್ಯಕ್ತಿಗಳು ತಮ್ಮ ಸಂಘ ಸಂಸ್ಥೆಗಳ ಲಾಂಛನ ಮತ್ತು ಹೆಸರುಗಳನ್ನು ನಾಮಫಲಕದಲ್ಲಿ ನಿಯಮಬಾಹಿರವಾಗಿ ಬಳಸುತ್ತಿರುವುದು ಹಾಗೂ ಸರ್ಕಾರಿ ಅಧಿಕಾರಿಗಳು ತಮ್ಮ ಸ್ವಂತ ವಾಹನಕ್ಕೆ ಸರ್ಕಾರಿ ಸಂಸ್ಥೆಯ ಅಂದರೆ BBMP, BDA, KHB, KSFC, MSIL, KPTCL, BESCOM, KSRTC ಈ ರೀತಿಯ ಅನಧಿಕೃತ ನಂಬರ್ ಪ್ಲೇಟುಗಳನ್ನು ಅಳವಡಿಸಿಕೊಂಡು ಸಂಚರಿಸುತ್ತಿರುವುದು ಕಂಡು ಬಂದಿದ್ದು, ಇಂತಹ ಅನಧಿಕೃತ ನಂಬರ್ ಪ್ಲೇಟುಗಳನ್ನು ಬಳಸಿಕೊಂಡು ಸಂಚರಿಸುತ್ತಿರುವ ವಾಹನಗಳ ವಿರುದ್ಧ ಸೂಕ್ತ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ಅನುಪಾಲನಾ ವರದಿಯನ್ನು ಸಲ್ಲಿಸುವಂತೆ ಸೂಚಿಸಿದೆ.

2. ಖಾಸಗಿ ವ್ಯಕ್ತಿಗಳು ತಮ್ಮ ಸಂಘ ಸಂಸ್ಥೆಗಳ ಲಾಂಛನ ಮತ್ತು ಹೆಸರುಗಳನ್ನು ನಾಮಫಲಕದಲ್ಲಿ ನಿಯಮಬಾಹಿರವಾಗಿ ಬಳಸುತ್ತಿರುವುದು ಹಾಗೂ ಸರ್ಕಾರಿ ಅಧಿಕಾರಿಗಳು ತಮ್ಮ ಸ್ವಂತ ವಾಹನಕ್ಕೆ ಸರ್ಕಾರಿ ಸಂಸ್ಥೆಯ ಅಂದರೆ BBMP, BDA, KHB, KSFC, MSIL, KPTCL, BESCOM, KSRTC ಈ ರೀತಿಯ ಅನಧಿಕೃತ ನಂಬರ್ ಪ್ಲೇಟುಗಳನ್ನು ಅಳವಡಿಸಿಕೊಂಡು ಸಂಚರಿಸುತ್ತಿರುವುದು ಕರ್ನಾಟಕ ಮೋಟಾರು ವಾಹನಗಳ ನಿಯಮಗಳು 1989ರ ನಿಯಮ 145A ಹಾಗೂ Emblems and Names (Prevention of Improper Use) Act 1950ರ ಕಲಂ 3 ರನ್ವಯ ಸರ್ಕಾರದ ಪೂರ್ವಾನುಮತಿಯಿಲ್ಲದೇ ಬಳಸುತ್ತಿರುವುದು ನಿಯಮಬಾಹಿರವಾಗಿದೆ. ಹಾಗೂ ಅಂತಹ ಅನಧಿಕೃತ ನಾಮ ಫಲಕಗಳನ್ನು ಕೂಡಲೇ ತೆರವುಗೊಳಿಸುವಂತೆ ಸೂಚಿಸಲಾಗಿದೆ.

3. ತಮ್ಮ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಕ್ಷೇತ್ರ ಇಲಾಖೆ / ನಿಗಮ / ಮಂಡಳಿಗಳು ಕೂಡ ಮಾನ್ಯ ಉಚ್ಛ ನ್ಯಾಯಾಲಯದ ನಿರ್ದೇಶನವನ್ನು ಚಾಚೂ ತಪ್ಪದೆ ಪಾಲಿಸುವಂತೆ ಸೂಚಿಸಿದೆ.

4. ಮೇಲ್ಕಂಡ ಕ್ರಿಮಿನಲ್ ಪಿಟಿಷನ್ ಸಂಖ್ಯೆ: 1850/2017 ರ ಪ್ರಕರಣದಲ್ಲಿ ಮಾನ್ಯ ಉಚ್ಛ ನ್ಯಾಯಾಲಯವು ನೀಡಿರುವ ನಿರ್ದೇಶನದಂತೆ ಅನಧಿಕೃತ ನಾಮ ಫಲಕಗಳನ್ನು ಅಳವಡಿಸಿಕೊಂಡಿರುವಂತಹ ವಾಹನಗಳ ವಿರುದ್ಧ ಕರ್ನಾಟಕ ಮೋಟಾರು ವಾಹನಗಳ ನಿಯಮಗಳು 1989ರ ನಿಯಮ 145A ಹಾಗೂ Emblems and Names (Prevention of Improper Use) Act 1950ರ ಕಲಂ 3ರನ್ವಯ ಪ್ರಕರಣಗಳನ್ನು ದಾಖಲಿಸಿ ನಿಯಮಗಳನ್ನು ಉಲ್ಲಂಘನೆ ಮಾಡುವಂತಹ ವ್ಯಕ್ತಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಈ ಮೂಲಕ ಸೂಚಿಸಿದೆ.

(ಟಿ.ಎಂ.ವಿಜಯಕುಮಾರ್)
ಮುಖ್ಯ ಕಾರ್ಯದರ್ಶಿ

ಪ್ರತಿ ಸೂಕ್ತ ಕ್ರಮಕ್ಕಾಗಿ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
2. ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
3. ಪೊಲೀಸ್ ಆಯುಕ್ತರು, ಬೆಂಗಳೂರು ನಗರ, ಬೆಂಗಳೂರು
4. ಆಯುಕ್ತರು, ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
5. ಆಯುಕ್ತರು, ಬೆಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು
6. ಆಯುಕ್ತರು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು
7. ವ್ಯವಸ್ಥಾಪಕ ನಿರ್ದೇಶಕರು, ಎಂಎಸ್‌ಐಎಲ್, ಬೆಂಗಳೂರು
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ, ಬೆಂಗಳೂರು
9. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಮಂಡಳಿ (ಬೆಸ್ಕಾಂ)
10. ರಾಜ್ಯದ ಎಲ್ಲಾ ನಿಗಮ /ಮಂಡಳಿಗಳು.